ಆ) ಬೆಳಗಾಂ ಜಿಲ್ಲೆಯಲ್ಲಿ 100 ವಿದ್ಯಾರ್ಥಿನಿಲಯಗಳ ಪೈಕಿ 40 ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡ ಇರುವುದಿಲ್ಲ. ಆಯವ್ಯಯದಲ್ಲಿ ಒದಗಿಸಲಾಗುವ ಹಣದ ಗಾತ್ರದ ಮೇರೆಗೆ ಇಲಾಖೆಯಲ್ಲಿನ ವಿದ್ಯಾರ್ಥಿನಿಲಯಗಳಿಗೆ ಹಂತ ಹಂತವಾಗಿ ಸ್ವಂತ ಕಟ್ಟಡವನ್ನು ನಿರ್ಮಿಸಲಾಗುತ್ತಿದೆ.

ಇ) ಬೆಳಗಾಂ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನಲ್ಲಿ 12 ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳಿದ್ದು, ಈ ಪೈಕಿ 7 ನಿಲಯಗಳಿಗೆ ಸ್ವಂತ ಕಟ್ಟಡಗಳು ಇರುತ್ತದೆ. ಉಳಿದ 5 ನಿಲಯಗಳಿಗೆ ಸ್ವಂತ ಕಟ್ಟಡ ಇರುವುದಿಲ್ಲ. ನಿವೇಶನದ ಲಭ್ಯತೆ ಹಾಗೂ ಆಯವ್ಯಯದ ಹಣದ ಅವಕಾಶವನ್ನು ಪರಿಶೀಲಿಸಿ ವಿದ್ಯಾರ್ಥಿನಿಲಯಗಳ ಕಟ್ಟಡಗಳ ನಿರ್ಮಾಣವನ್ನು ಹಂತ ಹಂತವಾಗಿ ನಿರ್ಮಿಸಲಾಗುತ್ತಿದೆ.

ಈ) ಕಟ್ಟಡವನ್ನು ನಿರ್ಮಿಸಲು ಸೂಕ್ತ ನಿವೇಶನವನ್ನು ಪಡೆಯಲು ಕ್ರಮ ವಹಿಸಲಾಗಿದೆ. ನಿವೇಶನವನ್ನು ಪಡೆದ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಮೆಟ್ರಿಕ್-ಪೂರ್ವ ಬಾಲಕಿಯರ ವಸತಿ ನಿಲಯಗಳನ್ನು ಪ್ರಾರಂಭಿಸುವುದು.

282(238)

ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ): ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಬೆಳಗಾಂ ಜಿಲ್ಲೆ, ಸವದತ್ತಿ ತಾಲ್ಲೂಕಿನ ಹಿರೇಬೂದನೂರು ಗ್ರಾಮದಲ್ಲಿ ಪ್ರತಿಶತ 90ರಷ್ಟು ಜನ ಪರಿಶಿಷ್ಟ ವರ್ಗ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಸೇರಿದವರಾಗಿರುವವರು ಎಂಬ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?

2) ಈ ಗ್ರಾಮದಲ್ಲಿ ಸರ್ಕಾರಿ ಪ್ರೌಢಶಾಲೆಯಿದ್ದು, ಬಾಲಕಿಯರ ವಸತಿ ಸೌಕರ್ಯಕ್ಕಾಗಿ ಯಾವುದೇ ವಸತಿನಿಲಯಗಳು ಇಲ್ಲದೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?

3) ಈ ಗ್ರಾಮದಲ್ಲಿ ಪರಿಶಿಷ್ಟ ಜಾತಿ : ಪರಿಶಿಷ್ಟ ವರ್ಗ ಹಾಗೂ ಪರಿಶಿಷ್ಟ ಪಂಗಡದ ಜನಾಂಗ ಹೆಚ್ಚಿಗೆ ಇರುವುದರಿಂದ ಹಾಗೂ ಇಲ್ಲಿನ ವಿದ್ಯಾರ್ಥಿನಿಯರ ವಿದ್ಯಾಭ್ಯಾಸಕ್ಕೆ ಅನುಕೂಲವಾಗಲು ಈ ಗ್ರಾಮದಲ್ಲಿ ಪರಿಶಿಷ್ಟ ವರ್ಗ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಮೆಟ್ರಿಕ್-ಪೂರ್ವ ಬಾಲಕಿಯರ ವಸತಿ ನಿಲಯವನ್ನು ಪ್ರಾರಂಭಿಸಲು

ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು):

1) ಹೌದು

2) ಹೌದು

3) ಸದರಿ ಗ್ರಾಮದಿಂದ ಬಾಲಕಿಯರ ವಿದ್ಯಾರ್ಥಿನಿಲಯವನ್ನು ಪ್ರಾರಂಭಿಸಲು ಸೂಕ್ತ ಪ್ರಸ್ತಾವನೆ ಬಂದಲ್ಲಿ ವಿದ್ಯಾರ್ಥಿನಿಲಯದ ಕಟ್ಟಡ ಕಟ್ಟಲು ನಿವೇಶನದ ಲಭ್ಯತೆ, ಪರಿಶಿಷ್ಟ ಜಾತಿ: ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳು ಸಿಗುವ ಸಂಖ್ಯೆ ಹಾಗೂ ಮೂಲಭೂತ ಸೌಕರ್ಯವುಳ್ಳ ಕಟ್ಟಡ ಮತ್ತು ಹೈಸ್ಕೂಲ್ ಹಾಗೂ ಮಾಧ್ಯಮಿಕ ಶಾಲೆ ಇರುವ ಮಾಹಿತಿಯಾಧಾರದ ಮೇಲೆ ಕ್ರಮ ಕೈಗೊಳ್ಳಲಾಗುವುದು.

ವಸತಿ ನಿಲಯದ ಕಟ್ಟಡವನ್ನು ಕಟ್ಟಲು ಕ್ರಮ ಕೈಗೊಳ್ಳುವುದು.

283(240)

ಶ್ರೀ ಕೌಜಲಗಿ ಮಹಾಂತೇಶ ಶಿವಾನಂದ: ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂ ಜಿಲ್ಲೆ ಸವದತ್ತಿ ತಾಲ್ಲೂಕಿನ ಹಾರುಗೊಪ್ಪ ಗ್ರಾಮದಲ್ಲಿ ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ಇಲಾಖೆಯ ಮೆಟ್ರಿಕ್‌ಪೂರ್ವ ಬಾಲಕರ ವಸತಿ ನಿಲಯದ ಕಟ್ಟಡ ಇಲ್ಲದೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ವಸತಿನಿಲಯವನ್ನು ಕಟ್ಟಲು ಆ ಗ್ರಾಮದ ಜನರು ಉಚಿತವಾಗಿ ಸ್ಥಳವನ್ನು (ದಾನರೂಪವಾಗಿ) ಕೊಟ್ಟ ಸಂಗತಿ ನಿಜವೇ?

ಇ) ಹಾಗಿದ್ದಲ್ಲಿ, ಕೂಡಲೇ ಈ ಗ್ರಾಮದಲ್ಲಿ ಮೆಟ್ರಿಕ್‌ಪೂರ್ವ ಬಾಲಕರ ವಸತಿ ನಿಲಯವನ್ನು ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ; ಮತ್ತು ಎಷ್ಟು ದಿನಗಳಲ್ಲಿ ವಸತಿನಿಲಯವನ್ನು ಕಟ್ಟಿ ಮುಗಿಸಲಾಗುವುದು?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಹೌದು